ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

10

ಇಲಾಖೆ / ವಿಷಯ : DEPARTMENT / SUBJECT: ಕೇಂದ್ರ

ಪತ್ರಿಕೆಯ ಹೆಸರು : NAME OF THE NEWS PAPER: ಪ್ರಜಾವಾಣಿ    ದಿನಾಂಕ : DATE : 12/11/20


# ಆನ್‌ಲೈನ್ ಮೇಲೆ ಕೇಂದ್ರದ ಕಣ್ಣು

## ಅಶ್ಲೀಲತೆ, ಸುಳ್ಳು ಸುದ್ದಿ ಆರೋಪ ಹಿನ್ನೆಲೆ । ಕೇಂದ್ರ ಸಂಪುಟದ ನಿರ್ಧಾರ

**ನವದೆಹಲಿ:** ಅಶ್ಲೀಲ ದೃಶ್ಯಾವಳಿ ಮತ್ತು ಸುಳ್ಳು ಸುದ್ದಿಗಳ ಹೆಚ್ಚಳದ ಬಗ್ಗೆ ದೂರುಗಳು ಕೇಳಿಬಂದ ಹಿನ್ನೆಲೆಯಲ್ಲಿ ಕೇಂದ್ರ ಸರ್ಕಾರ, ಇವುಗಳ ಮೇಲೆ ನಿಗಾ ಇಡಲು ನಿರ್ಧಾರ ಮಾಡಿದೆ.

ಬುಧವಾರ ಪ್ರಧಾನಿ ನರೇಂದ್ರ ಮೋದಿ ನೇತೃತ್ವದಲ್ಲಿ ನಡೆದ ಕೇಂದ್ರ ಸಚಿವ ಸಂಪುಟ ಸಭೆಯಲ್ಲಿ ಈ ನಿರ್ಧಾರ ತೆಗೆದುಕೊಳ್ಳಲಾಗಿದೆ. ಇದರ ಅನ್ವಯ ಇನ್ನು ಮುಂದೆ ಒಟಿಟಿ ಪ್ಲಾಟ್‌ಫಾರ್ಮ್‌ಗಳಾದ ಅಮೆಜಾನ್ ಪ್ರೈಮ್, ನೆಟ್‌ಫ್ಲಿಕ್ಸ್, ಹಾಟ್‌ಸ್ಟಾರ್ ಕೇಂದ್ರ ಮಾಹಿತಿ ಮತ್ತು ತಂತ್ರಜ್ಞಾನ ಸಚಿವಾಲಯದ ಪರಿಧಿಯೊಳಗೆ ಬರಲಿವೆ. ಈ ಸಂಬಂಧ ಕೇಂದ್ರ ಸರ್ಕಾರ ಹೊರಡಿಸಿರುವ ಮಾರ್ಗಸೂತ್ರಗಳಿಗೆ ರಾಷ್ಟ್ರಪತಿ ರಾಮನಾಥ್ ಕೋವಿಂದ್ ಅವರು ಸಹಿ ಹಾಕಿದ್ದಾರೆ.

**ನ್ಯೂಸ್ ಪೋರ್ಟಲ್‌ಗಳ ಮೇಲೂ ನಿಗಾ:** ಕೇವಲ ಒಟಿಟಿಗಳಷ್ಟೇ ಅಲ್ಲ, ನ್ಯೂಸ್ ಪೋರ್ಟಲ್‌ಗಳೂ ಕೇಂದ್ರ ಸರ್ಕಾರದ ಅಧೀನಕ್ಕೆ ಬರಲಿವೆ. ಅಂದರೆ, ಸರ್ಕಾರ ರೂಪಿಸುವ ನಿಯಮಾವಳಿಗಳನ್ನು ಈ ಪೋರ್ಟಲ್‌ಗಳು ಕಡ್ಡಾಯವಾಗಿ ಪಾಲಿಸಲೇಬೇಕಾಗುತ್ತದೆ. ಅಷ್ಟೇ ಅಲ್ಲ, ಫೇಸ್‌ಬುಕ್, ಟ್ವಿಟರ್ ಮತ್ತು ಇನ್‌ಸ್ಟಾಗ್ರಾಮ್‌ಗೂ ಈ ನಿಯಮಾವಳಿಗಳು ಅನ್ವಯವಾಗಲಿವೆ.



- ಅಮೆಜಾನ್ ಪ್ರೈಮ್, ನೆಟ್‌ಫ್ಲಿಕ್ಸ್ ಸಹಿತ ವಿವಿಧ ಒಟಿಟಿಗಳ ಮೇಲೆ ಕೇಂದ್ರ ಸರ್ಕಾರದ ಕಟ್ಟುನಿಟ್ಟಿನ ನಿಗಾ
- ಸುದ್ದಿ ತಾಣಗಳು, ಸಾಮಾಜಿಕ ತಾಣಗಳ ಮೇಲೂ ಹದ್ದಿನ ಕಣ್ಣು

**ಏಕೆ ಈ ನಿರ್ಧಾರ?:** ಕೆಲವು ಒಟಿಟಿಗಳಲ್ಲಿ ಅಶ್ಲೀಲತೆಯನ್ನು ಬಿಂಬಿಸುವ ಕಾರ್ಯಕ್ರಮಗಳು ಪ್ರಸಾರವಾಗುತ್ತಿದ್ದವು. ಸಿನಿಮಾದಂತೆಯೇ ಇವುಗಳನ್ನೂ ಸೆನ್ಸಾರ್ ಮಾಡಬೇಕು ಎಂಬ ಒತ್ತಾಯ ಬಹುದಿನಗಳಿಂದ ಇತ್ತು. ಅವರಲ್ಲೂ ಇತ್ತೀಚೆಗಷ್ಟೇ ಲೈಲಾ ಎಂಬ ಕಾರ್ಯಕ್ರಮ ತೀವ್ರ ವಿವಾದಕ್ಕೂ ಕಾರಣವಾಗಿತ್ತು.

**ನ್ಯೂಸ್ ಪೋರ್ಟಲ್:** ದೇಶದಲ್ಲೀಗ ಲೆಕ್ಕಕ್ಕೇ ಸಿಗದಷ್ಟು ಸುದ್ದಿ ವೆಬ್‌ಸೈಟ್‌ಗಳು ಹುಟ್ಟಿಕೊಂಡಿವೆ. ಕೆಲವು ವೆಬ್‌ಸೈಟುಗಳು ಸುಳ್ಳು ಸುದ್ದಿಗಳನ್ನು ಪ್ರಸಾರ ಮಾಡುತ್ತಿರುವ ಬಗ್ಗೆ ಆರೋಪಗಳಿದ್ದವು. ಇವುಗಳ ನಿಯಂತ್ರಿಸಬೇಕು ಎಂಬ ಆಗ್ರಹವೂ ಕೇಳಿಬಂದಿತ್ತು.

**ಈಗ ನಿಗಾ ಇಡಲಾಗುತ್ತಿದೆಯೇ?:** ನಮ್ಮ ಭಾರತದಲ್ಲಿ ಒಟಿಟಿ ವೇದಿಕೆಯಲ್ಲಿ ಪ್ರಸಾರವಾಗುವ ಕಾರ್ಯಕ್ರಮಗಳು ಮತ್ತು ಆನ್‌ಲೈನ್ ಸುದ್ದಿ ವೆಬ್‌ಸೈಟ್‌ಗಳ ಮೇಲೆ ನಿಗಾ ಇಡುವ ಯಾವುದೇ ವ್ಯವಸ್ಥೆ ಇಲ್ಲ. ಇವುಗಳ ನಿಯಂತ್ರಣಕ್ಕೆ ಒಂದು ವ್ಯವಸ್ಥೆ ಬೇಕು ಎಂಬ ಆಗ್ರಹವಿತ್ತು. ಈಗ ಕೇಂದ್ರ ಮಾಹಿತಿ ಮತ್ತು ಪ್ರಸಾರ ಸಚಿವಾಲಯ ಇದಕ್ಕೊಂದು ವ್ಯವಸ್ಥೆ ಕಲ್ಪಿಸುವ ಸಾಧ್ಯತೆ ಇದೆ.